**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ , ಚನ್ನಗಿರಿ .**

**ಸಿ.ಸಿ. ಸಂಖ್ಯೆ: 237/2017**

ಹೆಸರು: ಸತೀಶ್ ನಾಯಕ್ ಕೆ ಸಿ.ಡಬ್ಲ್ಯೂ: 9

ವಯಸ್ಸು: 40 ಪಿ.ಡಬ್ಲ್ಯೂ: 10

ತಂದೆ: ಕೃಷ್ಣನಾಯಕ್ ಕೆ

ಉದ್ಯೋಗ: ಪಿಎಸಿ ಐ ಚನ್ನಗಿರಿ ಪೊ ಠಾಣೆ

ವಾಸ ಸ್ಥಳ: ಚನ್ನಗಿರಿ

ಸಾಕ್ಷಿಗೆ ದಿನಾಂಕ: 23.10.2024 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಸಅಅರವರಿಂದ ಮುಖ್ಯ ವಿಚಾರಣೆ**

08-01.2014 ರಿಂದ 19-12-2014 ರವರೆಗೆ ಪಿ.ಎಸ್.ಐ ಆಗಿ ಚನ್ನಗಿರಿ ಪೋಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ: 20-06-204 ರಂದು ಚಾಸಾ 1 ರವರು ಸೂಚಿಸಿದ ಮೇರೆಗೆ ಮಧ್ಯಾಹ್ನ 1-15 ಗಂಟೆಗೆ ಗಣಕೀಕೃತ ದೂರನ್ನು ಸ್ವೀಕರಿಸಿ, ಠಾಣೆ ಗುನ್ನೆ ನಂ: 236/2014 ಕಲಂ 420, 468 ಐಪಿಸಿ ರೀತ್ಯಾ ಪ್ರಕರಣ ದಾಖಲಿಸಿರುತ್ತೇನೆ. ಸದರಿ ದೂರನ್ನು ಈಗಾಗಲೇ ನಿಪಿ 1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1 ಬಿ ಎಂದು ಗುರುತಿಸಲಾಯಿತು.

ನಂತರ ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸದರಿ ಪ್ರ.ವ.ವರದಿಯನ್ನು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ 9 ಹಾಗೂ 9ಎ ಎಂದು ಗುರುತಿಸಲಾಯಿತು.

ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 10 ರವರಿಗೆ ವರ್ಗಾಯಿಸಿರುತ್ತೇನೆ.

**ಆರೋಪಿ ಪರ ವಕೀಲರಿಂದ ಪಾಟೀಸವಾಲು ಃ-**

ಚಾಸಾ 1 ರವರಿಂದ ನಾನು ಯಾವುದೇ ದೂರನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ 1ರವರ ಕೋರಿಕೆಯ ಮೇರೆಗೆ ಸುಳ್ಳು ದೂರನ್ನು ಪಡೆದು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸುಳ್ಳು ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ ಹೇ ಕೇ ಸರಿ ಇದೆ.**

**Sd/-**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**